ಶ್ರೀ ಎಸ್.ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :

ಅ) ಧಾರವಾಡ ಜಿಲ್ಲೆಯ ನವಲಗುಂದ ಪಟ್ಟಣದ ಕುಡಿಯತುವ ನೀರು ಸರಬರಾಜು ಯೋಜನೆಯನ್ನು ಏಪ್ರಿಲ್ 2006ರಲ್ಲಿ ಚಾಲನೆಗೊಳಿಸಲಾಗಿದ್ದು, ಈ ಯೋಜನೆಯಿಂದ ಪಟ್ಟಣದ ಜನರಿಗೆ ನೀರು ಸರಬರಾಜು ಮಾಡಲಾಗುತ್ತಿದೆ. ಈ ಯೋಜನೆಯು ಸ್ಥಗಿತಗೊಂಡಿರುವುದಿಲ್ಲ.

ಆ) ಈ ಯೋಜನೆಯಡಿಯಲ್ಲಿ ಪಟ್ಟಣದ ವಿಸ್ತೃತ ಪ್ರದೇಶದಲ್ಲಿ (Extension Area) ನಿರ್ಮಿಸಬೇಕಾಗಿರುವ ಮೇಲ್ಮಟ್ಟದ ಜಲಸಂಗ್ರಹಾಗಾರ ಹಾಗೂ ವಸತಿ ಗೃಹಗಳ ಕಾಮಗಾರಿಗಳನ್ನು ಶೇಕಡಾ 95ರಷ್ಟು ಪೂರ್ಣಗೊಳಿಸಲಾಗಿದ್ದು, ಬಾಕಿ ಉಳಿದ ಕಾಮಗಾರಿಗಳನ್ನು ಆಗಸ್ಟ್ 2009 ಅಂತ್ಯದೊಳಗೆ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗಿದೆ.

ಇ) ಈ ಯೋಜನೆಯಡಿಯಲ್ಲಿ ನಿರ್ಮಿಸಬೇಕಾಗಿರುವ ಒಂದು ಮೇಲ್ಮಟ್ಟದ ಜಲಸಂಗ್ರಹಾಗಾರಕ್ಕೆ ಅವಶ್ಯವಿರುವ ಖಾಸಗಿ ಜಮೀನನ್ನು ಖರೀದಿಸಿ ಒದಗಿಸುವಲ್ಲಿ ವಿಳಂಬ ಉಂಟಾಗಿರುತ್ತದೆ ಹಾಗೂ ಗುತ್ತಿಗೆದಾರರಿಂದಲೂ ಸಹ ಈ ಕಾಮಗಾರಿ ಪೂರ್ಣಗೊಳಿಸುವಲ್ಲಿ ವಿಳಂಬವಾಗಿರುತ್ತದೆ. ಈ ಕುರಿತು ಗುತ್ತಿಗೆದಾರರ ಮೇಲೆ ಟೆಂಡರ್ ಕರಾರಿನಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿರುತ್ತದೆ. ಈ ಯೋಜನೆಯಡಿ ಬಾಕಿ ಉಳಿದ ಮುಕ್ತಾಯ ಹಂತದಲ್ಲಿರುವ ಕೆಲಸಗಳನ್ನು ಆಗಸ್ಟ್ 2009ರ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು.

768 ಶ್ರೀ ಶ್ರೀನಿವಾಸ್ ಎಂ.(ಮಂಡ್ಯ) : ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ನಗರದಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಕೊಳವೆ ಬಾವಿಗಳಲ್ಲಿ ಅಂತರ್ಜಲ ಮಟ್ಟ ಕಡಿಮೆಯಾಗಿ ನೀರು ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಉ) ಮಂಡ್ಯ ನಗರದ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ವಿಶೇಷ ಅನುದಾನವನ್ನು ನೀಡುವುದೇ;

ಊ) ಹಾಗಿದ್ದಲ್ಲಿ, ಯಾವಾಗ ಮತ್ತು ಎಷ್ಟು ಪ್ರಮಾಣದಲ್ಲಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು?

ಶ್ರೀ ಎಸ್.ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :

ಅ) ಕಳೆದ ಮೇ ಮತ್ತು ಜೂನ್ ತಿಂಗಳಿನಲ್ಲಿ ನಿರಂತರ ವಿದ್ಯುತ್ ಸರಬರಾಜಿನಲ್ಲಿ ಆದ ವ್ಯತ್ಯಯದಿಂದ ಹಾಗೂ ವಿ.ಸಿ. ನಾಲಾದಲ್ಲಿ ನೀರಿನ ಹರಿಯುವಿಕೆಯು ನಿಂತಿದ್ದರಿಂದ ಮಂಡ್ಯ ನಗರದಲ್ಲಿ ಕುಡಿಯುವ ನೀರಿಗೆ ಸ್ವಲ್ಪ ಮಟ್ಟಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಈ ವಿಷಯದಲ್ಲಿ ವಿದ್ಯುತ್ ನಿಗಮದೊಂದಿಗೆ ಚರ್ಚಿಸಿ ಪ್ರಸ್ತುತ ತಿಂಗಳಿನಲ್ಲಿ ವಿದ್ಯುತ್ ವ್ಯತ್ಯಯ ತೊಂದರೆ ನಿವಾರಣೆಯಾಗಿರುತ್ತದೆ. ಇದಲ್ಲದೆ ವಿ.ಸಿ.ನಾಲದಲ್ಲೂ ನಿರನ್ನು ಬಿಡಲಾಗಿರುತ್ತದೆ.

ಇ) –ಬಂದಿದೆ–

ಈ) ಸರ್ಕಾರವು ಮಳೆ ನೀರು ಕೊಯ್ಲು ಕಾರ್ಯಕ್ರಮದ ಬಗ್ಗೆ ರಾಜ್ಯ ನೀತಿ ಮತ್ತು ಕರಡು ನಿಯಮಗಳನ್ನು ರೂಪಿಸುತ್ತಿದೆ. ಅನಂತರ ನಗರದ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಸಾರ್ವಜನಿಕ ಅರಿವನ್ನು ಮೂಡಿಸುವ ಸಲುವಾಗಿ ಕರ್ನಾಟಕ ಪುರಸಭೆ ಕಾಯ್ದೆಗೆ ತಿದ್ದುಪಡಿ ತಂದು ಎಲ್ಲಾ ಕಟ್ಟಡಗಳ ಮೇಲೆ ಕಡ್ಡಾಯವಾಗಿ ಮಳೆ ನೀರು ಕೊಯ್ಲು ಕಾರ್ಯಕ್ರಮ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಉ) ಇದು ತಾತ್ಕಾಲಿಕ ತೊಂದರೆಯಾಗಿದ್ದು, ನಿರಂತರವಾದ ವಿದ್ಯುತ್ ಸರಬರಾಜನ್ನು ಮಾಡಿದ್ದಲ್ಲಿ, ಸಾಕಷ್ಟು ನೀರನ್ನು ಸರಬರಾಜು ಮಾಡಲಾಗುವುದು.

ಊ) ಉದ್ಭವಿಸುವುದಿಲ್ಲ.

550 ಶ್ರೀ ಸುರೇಶ್‌ಬಾಬು ಸಿ.ಬಿ.(ಚಿಕ್ಕನಾಯಕನಹಳ್ಳಿ) : ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕು, ಕೋಡಿಹಳ್ಳಿ ಗ್ರಾಮದ ಸ.ನಂ–40 ಗೋಮಾಳ ಮತ್ತು ಅರಣ್ಯ ಜಮೀನಿನಲ್ಲಿ ಬಳಪದ ಕಲ್ಲುಗಣಿಗಾರಿಕೆ ಮಾಡಲು ಗಣಿಗುತ್ತಿಗೆ ನೀಡಲಾಗಿದೆಯೇ?

ಆ) ನೀಡಿದ್ದಲ್ಲಿ, ಯಾವ ಕಂಪನಿಗೆ ನೀಡಲಾಗಿದೆ; ಎಷ್ಟು ವರ್ಷಗಳ ಅವಧಿಗೆ ನೀಡಲಾಗಿದೆ (ಸಂಪೂರ್ಣ ಮಾಹಿತಿ ಒದಗಿಸುವುದು);